# ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆ:2824/2020

| | | | |
|---|---|---|---|
| ಸಾಕ್ಷಿದಾರರ ಹೆಸರು | – | ಶಿವಶಂಕರ | ಸಿಡಬ್ಲ್ಯೂ-6 |
| ತಂದೆಯ/ಗಂಡನ ಹೆಸರು | – | ಮುದ್ದಣ್ಣ | ಪಿಡಬ್ಲ್ಯೂ-4 |
| ವಯಸ್ಸು | – | ಸು.45 ವರ್ಷ | ಪ್ರ.ವ.ಬೋ ದಿನಾಂಕಃ13.06.2024 |
| ಉದ್ಯೋಗ | – | ಪ್ರ.ದ.ಸ. ನಗರಸಭೆ | |
| ವಾಸ | – | ಹಿರಿಯೂರು. | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿಯವರಿಂದಃ-**

ಸಾಕ್ಷಿಯು ಅಮಾನತ್ತು ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ-7** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-7(ಎ)** ಎಂದು ಗುರುತಿಸಲಾಯಿತು. ದಿಃ05.09.2020 ರಂದು ಬೆಂಗಳೂರು ಗ್ರಾಮಂತರ ಜಿಲ್ಲೆ ಚಿಕ್ಕಸಂದ್ರ ಗ್ರಾಮದ, ತೋಟದ ಮನೆಯಲ್ಲಿ ಆರೋಪಿ ತೋರಿಸಿದ ಸ್ಥಳದಲ್ಲಿ, ಒಬ್ಬ ಮಹಿಳೆಯಿಂದ ಬಂಗಾರದ ಆಭರಣಗಳನ್ನು ಪಡೆದುಕೊಂಡರು. ಮಧ್ಯಾಹ್ನ 3.30 ರಿಂದ 4.00 ಗಂಟೆಯವರೆಗೆ ನನ್ನ ಸಮಕ್ಷಮ ಸ್ಥಳದಲ್ಲಿ ಅಮಾನತ್ತು ಪಂಚನಾಮೆ ಜರುಗಿಸಿ ನನ್ನ ಸಹಿ ಪಡೆದರು. ನನ್ನೊಂದಿಗೆ ಚಾಸಾ-7 ರವರು ಸಹಿ ಮಾಡಿರುತ್ತಾರೆ. ನಿಪಿ-7 ರಲ್ಲಿರುವ ವಿಚಾರಗಳು ನನಗೆ ಗೊತ್ತು. ಸದರಿ ಸ್ಥಳಕ್ಕೆ ಹಿರಿಯೂರು ಗ್ರಾಮಾಂತರ ಪೋಲಿಸರು ಕರೆದುಕೊಂಡು ಹೋಗಿರುತ್ತಾರೆ. ನಾನು ಪೋಲಿಸರು ಅಮಾನತ್ತು ಪಡಿಸಿಕೊಂಡ ಆಭರಣಗಳನ್ನು ನೋಡಿದ್ದೇನೆ . ಈಗ ನೋಡಿದರೆ ಗುರುತಿಸುತ್ತೇನೆ.

**ಪಾಟೀ-ಸವಾಲುಃ ಆರೋಪಿ ಪರ ಶ್ರೀಮತಿ.ಹೆಚ್ ಬಿ ಆರ್ ವಕೀಲರಿಂದಃ**

ಪೋಲಿಸರು ನನಗೆ ಲಿಖಿತವಾಗಿ ನೋಟೀಸ್ ನ್ನು ನೀಡಿರುತ್ತಾರೆ. ನಾನು ಬೆ.7.00 ಗಂಟೆಗೆ ಹಿರಿಯೂರು ಗ್ರಾಮಾಂತರ ಪೋಲಿಸ್ ಠಾಣೆಗೆ ಹೋಗಿರುತ್ತೇನೆ. ಒಟ್ಟು 7 ಜನ ಸದರಿ ಸ್ಥಳಕ್ಕೆ ಪೋಲಿಸ್

ಜೀಪ್ ನಲ್ಲಿ ಚಿಕ್ಕಬಳ್ಳಾಪುರ ಮಾರ್ಗವಾಗಿ ಹೋಗಿರುತ್ತೇವೆ . ನಾವು ಸ್ಥಳಕ್ಕೆ ಹೋದಾಗ ಮಧ್ಯಾಹ್ನ 3.00 ಗಂಟೆಯಾಗಿತ್ತು. ಹಿರಿಯೂರು ಗ್ರಾಮಾಂತರ ಪೊಲೀಸ್ ಠಾಣೆಯಿಂದ ಸದರಿ ಸ್ಥಳಕ್ಕೆ ಇರುವ ದೂರ ನನಗೆ ಗೊತ್ತಿಲ್ಲ. ಸದರಿ ಸ್ಥಳವು ಪೋಲಿಸರು ತೋರಿಸಿದ ನಂತರ ನನಗೆ ತಿಳಿಯಿತು ಎಂದರೆ ಆರೋಪಿಯು ತೋರಿಸಿದ ನಂತರ ತಿಳಿದಿರುತ್ತದೆ ಎಂದು ಸ್ವ ಇಚ್ಚೆಯಿಂದ ನುಡಿಯುತ್ತಾರೆ. ಸದರಿ ಆಭರಣಗಳು ಯಾರಿಗೆ ಸಂಬಂಧಪಟ್ಟವು ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ನಿಪಿ-7 ರಂತೆ ಅಮಾನತ್ತು ಪಂಚನಾಮೆ ಜರುಗಿಸಿರುವುದಿಲ್ಲ ಎಂದರೆ ಸರಿಯಲ್ಲ. ಪೋಲಿಸರು ಖಾಲಿ ಹಾಳೆಗೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸ್ಥಳದ ಚೆಕ್ಕುಬಂಧಿ ಹೇಳಲು ಆಗುವುದಿಲ್ಲ, ನಾವು ಘಟನಾ ಸ್ಥಳಕ್ಕೆ ಹೋಗಿಲ್ಲ, ಪೋಲಿಸರು ಯಾವುದೇ ಆಭರಣಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಪೋಲಿಸರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ಹಿರಿಯೂರು.